**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**<u>ಸಿ.ಸಿ. ಸಂಖ್ಯೆಃ 494/2021</u>**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ : **ಪ್ರಭಾಕರ ಬಿನ್ ಮಾದೇಗೌಡ,**
ಸುಮಾರು **25** ವರ್ಷ ವಯಸ್ಸು,
ವಾಸಃ ಹುಸೇನ್ ಪುರ ಗ್ರಾಮ,
ಹುಣುಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

**<u>ದೋಷಾರೋಪಣೆ</u>**

**ಶ್ರೀಮತಿ. ನಮ್ರತಾ ಎಸ್. ಹೊಸಮಠ,** ಬಿ.ಎ., ಎಲ್.ಎಲ್.ಬಿ., ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣೆ ಸರಹದ್ದಿಗೆ ಸೇರಿದ ಹುಸೇನ್ ಪುರ ಗ್ರಾಮದಲ್ಲಿ, ಆರೋಪಿಯಾದ ನೀವು ತನ್ನ ತಮ್ಮನಿಗೆ ಆಟೋವನ್ನು ನೀಡಿರಲಿಲ್ಲ ಎಂಬ ಕಾರಣಕ್ಕೆ ಸಾಕ್ಷಿ-1 ರವರ ದ್ವೇಷ ಸಾಧಿಸುತ್ತಾ ಬಂದಿದ್ದು, ದಿನಾಂಕ 16.10.2020 ರಂದು ಬೆಳಗ್ಗಿನ ಜಾವ 2.00 ಗಂಟೆ ಸಮಯದಲ್ಲಿ ಸಾಕ್ಷಿ-01 ಮತ್ತು ಸಾಕ್ಷಿ-2 ರವರು ತಮ್ಮ ಮನೆಯಲ್ಲಿ ಮಲಗಿದ್ದಾಗ ಆರೋಪಿಯಾದ ನೀವು ಸಾಕ್ಷಿ-1 ರವರ ವಾಸದ ಮನೆಯ ಮೇಲ್ಭಾಗಕ್ಕೆ ಹತ್ತಿ ಆ ಮನೆಯ ಕಲ್ನಾರ್ ಶೀಟನ್ನು ಒಡೆದು ಹಾಕಿ, ಮನೆಯ ಮೇಲ್ಭಾಗದಿಂದ ಜಿಗಿದು ಒಳಗೆ ಅತಿಕ್ರಮ ಪ್ರವೇಶ

ಮಾಡಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 447 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೇಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ, ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಸಾಕ್ಷಿ-1 ರವರ ಮನೆಯ ಒಳಗೆ ಇರುವ ಕೊಠಡಿಯಲ್ಲಿ ಚಾಕುವನ್ನು ಹಿಡಿದುಕೊಂಡು ನಿಂತಿದ್ದಾಗ ಸಾಕ್ಷಿ-2 ರವರು ನಿಮ್ಮನ್ನು ನೋಡಿ ಕಿರುಚಿಕೊಂಡಾಗ ಆರೋಪಿಯಾದ ನೀವು ಚಾಕುವಿನಿಂದ ನಿಮ್ಮನ್ನು ಕೊಲೆ ಮಾಡುತ್ತೇನೆಂದು ಚಾಕುವನ್ನು ತೋರಿಸಿ ಕೊಲೆ ಬೆದರಿಕೆ ಹಾಕಿರುತ್ತೀರಿ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506(2) ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೇಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ, ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಸಾಕ್ಷಿ-2 ರವರ ಸೀರೆಯನ್ನು ಹಿಡಿದು ಎಳೆದಾಡಿ ಅವರ ರವಿಕೆಯನ್ನು ಹರಿದು ಹಾಕಿ ಅಪಮಾನ ಮಾಡಿ ಇದರಿಂದ ಸಾಕ್ಷಿ-2 ರವರಿಗೆ ಸಾಮಾನ್ಯ ಸ್ವರೂಪದ ಗಾಯವುಂಟಾಗಿರುತ್ತದೆ. ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 354(ಬಿ ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ನಾಲ್ಕನೇಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ, ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಸಾಕ್ಷಿ-1 ರವರ ವಾಸದ ಮನೆಯ ಕಲ್ನಾರ್ ಶೀಟನ್ನು ಒಡೆದು ಹಾಕಿ ಸಾಕ್ಷಿ-1 ರವರಿಗೆ ಅಂದಾಜು ರೂ.10.000/- ಗಳಷ್ಟು ನಷ್ಟ ಉಂಟು ಮಾಡಿರುತ್ತೀರೆಂದು, ಆ ಮೂಲಕ

ಭಾರತೀಯ ದಂಡ ಸಂಹಿತೆ ಕಲಂ 427 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ನಮ್ರುತಾ ಎಸ್. ಹೊಸಮಠ)**

ದಿನಾಂಕಃ **24.06.2025** ಅಪರ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆಃ 494/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

-ವಿರುದ್ಧ-

ಆರೋಪಿ : **ಪ್ರಭಾಕರ ಬಿನ್ ಮಾದೇಗೌಡ,,**

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

**(ನಮ್ರತಾ ಎಸ್. ಹೊಸಮಠ)**
ದಿನಾಂಕಃ **24.06.2025** ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ**

**ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿ.ಸಿ. ಸಂಖ್ಯೆಃ 1032/2019**

ಫಿರ್ಯಾದುದಾರರುಃ ಹುಣಸೂರು ಗ್ರಾಮಾಂತರ ಪೋಲೀಸ್ ಠಾಣೆ
ಹುಣಸೂರು, ಮೈಸೂರು ಜಿಲ್ಲೆ

-ವಿರುದ್ಧ-

ಆರೋಪಿ **4-** ಸಲೀಮ ಬಾನು ಅಲಿಯಾಸ್ ಸಲ್ಮಾ ಬಾನು,

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

**(ಮನು ಪಟೇಲ್ ಬಿ.ವೈ.)**

ದಿನಾಂಕಃ **27.06.2022** ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.